ಅಸಲು ದಾವೆ ಸಂ: 19/2018

ಪಿ.ಡಬ್ಲು–1

**ದಿ: 01.12.2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆ : ವಾದಿ ಪರ ವಕೀಲರಿಂದ :**

ಮುಂದುವರೆದ ಮುಖ್ಯ ವಿಚಾರಣೆ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಪಾಟೀ ಸವಾಲು: 1 ನೇ ಪ್ರತಿವಾದಿ ಪರ ವಕೀಲರಾದ ಶ್ರೀ ಹೆಚ್.ಎನ್. ರವರಿಂದ :**

ನನಗೆ ಓದಲು ಮತ್ತು ಬರೆಯಲು ಬರುವುದಿಲ್ಲ. ನನ್ನ ಸಾಕ್ಷದ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ ಹಾಗೂ ಅದು ಯಾವ ಭಾಷೆಯಲ್ಲಿರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. ಅದರಲ್ಲಿ ಏನು ಬರೆದಿರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. ಈ ದಾವೆಯನ್ನು ನಾನು ದಂಡಪ್ಪ ರವರ ವಿರುದ್ದ ಸಲ್ಲಿಸಿರುತ್ತೇನೆ. ದಾವಾ ಆಸ್ತಿಯನ್ನು ನಾನು ಖರೀದಿ ಮಾಡಿರುತ್ತೇನೆ ಎಂದು ಸಲ್ಲಿಸಿರುತ್ತೇನೆ. ದಾವಾದ ಆಸ್ತಿಯ ಸರ್ವೆ ನಂಬರ್ ನನಗೆ ನೆನಪಿರುವುದಿಲ್ಲ. ದಾವಾದ ಆಸ್ತಿಯಲ್ಲಿ 4 ಎಕರೆ 29 ಗುಂಟೆ ಜಮೀನು ಇರುತ್ತದೆ. ದಾವಾ ಆಸ್ತಿಯು ಮಾತಪಳ್ಳಿ ಸೀಮಾಂತರದಲ್ಲಿರುತ್ತದೆ. ದಾವಾದ ಆಸ್ತಿಯು ಈಗ 1 ನೇ ಪ್ರತಿವಾದಿಯ ಹೆಸರಿನಲ್ಲಿರುತ್ತದೆ. ದಾವಾದ ಆಸ್ತಿಯ ಚಕ್ಕು ಬಂದಿ ನನಗೆ ಗೊತ್ತಿರುವುದಿಲ್ಲ.

ಈ ಹಂತದಲ್ಲಿ ವಕೀಲರ ಕೋರಿಕೆಯ ಮೇರೆಗೆ ಪಾಟೀ ಸವಾಲನ್ನು ಮುಂದೂಡಲಾಯಿತು.

(ಸಾಕ್ಷಿಯು ನೀಡಿರುವ ಸಾಕ್ಷವನ್ನು ಯಥಾವತ್ತಾಗಿ ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಿವಿಲ್ ಜಡ್ಜ್ & ಜೆ.ಎಂ.ಎಫ್.ಸಿ.
ದೇವದುರ್ಗ